RNU AIR DHARWAD

DECEMBER 9,2024
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಕೇಂದ್ರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸಮಗ್ರ ಸಾಧನೆ ವಿಭಾಗದಲ್ಲಿ, ಉಡುಪಿ ಜಿಲ್ಲಾ ಪಂಚಾಯ್ತಿಗೆ ತೃತೀಯ ಪುರಸ್ಕಾರ ಹಾಗೂ 2 ಕೋಟಿ ರೂಪಾಯಿ, ನಗದು ಬಹುಮಾನ ಪ್ರಕಟಿಸಿದೆ. ಬಡತನ ವಿಮುಕ್ತ ವಿಭಾಗದಲ್ಲಿ, ಕೊಡಗು ಜಿಲ್ಲೆ, ಮಡಿಕೇರಿ ತಾಲೂಕಿನ, ಗಾಳಿಬೀಡು ಗ್ರಾಮ ಪಂಚಾಯಿತಿಗೆ, ದೇಶಕ್ಕೆ ಪ್ರಥಮ ಸ್ಥಾನ ಲಭಿಸಿದೆ. 1 ಕೋಟಿ ರೂಪಾಯಿ ನಗದು ಬಹುಮಾನವನ್ನು ಪ್ರಕಟಿಸಲಾಗಿದೆ. ಹೊಸ ದಿಲ್ಲಿಯ ವಿಜ್ಞಾನ ಭವನದಲ್ಲಿ, ನಾಡಿದ್ದು 11ನೇ ತಾರೀಖು ಆಯೋಜಿತ ಕಾರ್ಯಕ್ರಮದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ರಾಷ್ಟ್ರೀಯ ಪುರಸ್ಕಾರಗಳನ್ನು ಪ್ರದಾನಮಾಡಿ, ಗೌರವಿಸಲಿದ್ದಾರೆ.

<><><>

ಸಶಸ್ತ್ರ ಪಡೆಗಳ ಧ್ವಜ ನಿಧಿಯನ್ನು, ಅತಿ ಹೆಚ್ಚು ಸಂಗ್ರಹಿಸಿದ, ಸರ್ಕಾರಿ ಸಂಸ್ಥೆ ಪ್ರಶಸ್ತಿಗೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ – ಕೆ.ಎಸ್.ಆರ್.ಟಿ.ಸಿ ಭಾಜನವಾಗಿದೆ. ಸತತ 10ನೇ ಬಾರಿಗೆ ರೋಲಿಂಗ್ ಶೀಲ್ಡ್ ಪ್ರಶಸ್ತಿಯನ್ನು ಕೆ.ಎಸ್.ಆರ್.ಟಿ.ಸಿ ತನ್ನದಾಗಿಸಿಕೊಂಡ, ದಾಖಲೆ ನಿರ್ಮಿಸಿ, ಗರಿಮೆ ಸಾಧಿಸಿದೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ, ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಸಮಾರಂಭದಲ್ಲಿ, ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರು, ಪ್ರಶಸ್ತಿ ಪ್ರದಾನ ಮಾಡಿ, ಗೌರವಿಸಿದರು. ಕೆ.ಎಸ್.ಆರ್.ಟಿ.ಸಿ ಸಾರ್ವಜನಿಕ ಸಂಪರ್ಕಾಧಿಕಾರಿ ಟಿ.ಎಸ್ ಲತಾ ಹಾಗೂ ಇತರರು ಪ್ರಶಸ್ತಿ ಸ್ವೀಕರಿಸಿದರು.

<><><>

ಬೆಳಗಾವಿಯಲ್ಲಿ 1924 ರಲ್ಲಿ, ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಜರುಗಿದ "ಕಾಂಗ್ರೆಸ್ ಅಧಿವೇಶನ" ದ ಶತಮಾನೋತ್ಸವ ಅಂಗವಾಗಿ ಸುವರ್ಣ ವಿಧಾನಸೌಧದ ನೆಲಮಹಡಿಯ ಕಾರಿಡಾರ್ ನಲ್ಲಿ ಆಯೋಜಿಸಲಾಗಿರುವ "ಗಾಂಧೀ ಭಾರತ" ಛಾಯಾಚಿತ್ರ ಪ್ರದರ್ಶನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಉದ್ಘಾಟಿಸಿದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್, ಸಚಿವರಾದ ಎಚ್.ಕೆ.ಪಾಟೀಲ, ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್ ಸಚಿವ ಸಂಪುಟದ ಸಹೋದ್ಯೋಗಿಗಳು ಪಾಲ್ಗೊಂಡಿದ್ದರು.

<><><>

ಧಾರವಾಡ–ಬೆಳಗಾವಿ, ಹುಬ್ಬಳ್ಳಿ–ಅಂಕೋಲಾ ಹಾಗೂ ಹುಬ್ಬಳ್ಳಿ–ಶಿರಸಿ–ತಾಳಗುಪ್ಪದ ಹೊಸ ರೈಲು ಮಾರ್ಗ ಯೋಜನೆ ಅನುಷ್ಠಾನಕ್ಕೆ, ಆದ್ಯತೆ ನೀಡಲಾಗಿದೆ ಎಂದು, ಕೇಂದ್ರ ಜಲಶಕ್ತಿ ಹಾಗೂ ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಹುಬ್ಬಳ್ಳಿಯ, ಗದಗ ರಸ್ತೆಯಲ್ಲಿರುವ ನೈಋತ್ಯ ರೇಲ್ವೆ ಪ್ರಧಾನ ಕಚೇರಿಯಲ್ಲಿ, ಹುಬ್ಬಳ್ಳಿ–ಧಾರವಾಡದ ರೇಲ್ವೆ ಯೋಜನೆಗಳ, ಪ್ರಗತಿ ಪರಿಶೀಲನೆ ಕೈಗೊಂಡು, ಸಚಿವರು ಮಾತನಾಡಿದರು. ಅಮೃತ್ ಭಾರತ್ ನಿಲ್ದಾಣಗಳ ಅಭಿವೃದ್ಧಿಯಲ್ಲಿ, 2 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ, ರಾಜ್ಯದ 61 ರೇಲ್ವೆ ನಿಲ್ದಾಣಗಳನ್ನು ಸಮಗ್ರವಾಗಿ, ಅಭಿವೃದ್ಧಿ ಪಡಿಸಲಾಗುತ್ತಿದೆ. ಈ ಎಲ್ಲ ಕಾಮಗಾರಿಗಳು, 2025ರ  ಮಾರ್ಚ್ ಒಳಗೆ ಪೂರ್ಣಗೊಳ್ಳಲಿವೆ ಎಂದು, ಸಚಿವ ಸೋಮಣ್ಣ ಹೇಳಿದರು.

<><><>

ರಾಜ್ಯದ 7 ಕೋಟಿ ಜನರ ಪೈಕಿ, 4 ಕೋಟಿ 5 ಲಕ್ಷ ಜನರು ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಯ ಲಾಭವನ್ನು ಯಾವುದೇ ಮಧ್ಯವರ್ತಿಗಳ ಸಹಾಯವಿಲ್ಲದೆ ನೇರವಾಗಿ ಪಡೆಯುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು. ಹಾವೇರಿ ಜಿಲ್ಲೆ, ಸವಣೂರಿನಲ್ಲಿ ಆಯೋಜಿಸಲಾಗಿದ್ದ ಶಿಗ್ಗಾಂವ ವಿಧಾನಸಭಾ ಕ್ಷೇತ್ರದ ಮತದಾರರಿಗೆ ಕೃತಜ್ಞತೆ ಸಲ್ಲಿಕೆ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ವಾರ್ಷಿಕ ಗ್ಯಾರಂಟಿ ಯೋಜನೆಗಳಿಗೆ 56 ಸಾವಿರ ಕೋಟಿ ರೂಪಾಯಿ ಖರ್ಚು ಮಾಡಲಾಗುತ್ತಿದೆ, ರಾಜ್ಯದ ಬಡ ಕುಟುಂಬಗಳು ಯೋಜನೆಗಳ ಲಾಭ ಪಡೆಯುತ್ತಿವೆ ಎಂದರು.

<><><>

ಹುಬ್ಬಳ್ಳಿಯ ಗಂಗೂಬಾಯಿ ಹಾನಗಲ್, ಭಾರತೀಯ ಶಾಸ್ತ್ರೀಯ ಸಂಗೀತ ಗುರುಕುಲ ಶಿಕ್ಷಣ ಕೇಂದ್ರದಲ್ಲಿ ಅಭ್ಯಸಿಸುತ್ತಿರುವ ವಿದ್ಯಾರ್ಥಿಗಳನ್ನು, ಗುರುಕುಲದಿಂದ ಸ್ಥಳಾಂತರಿಸದಂತೆ, ಧಾರವಾಡ ಹೈಕೋರ್ಟ್ ಪೀಠದ ನ್ಯಾಯಮೂರ್ತಿ ಪ್ರದೀಪ್ ಸಿಂಗ್ ಮಧ್ಯಂತರ ಆದೇಶ ಹೊರಡಿಸಿದ್ದಾರೆ. ಗುರುಕುಲವನ್ನು ಮೈಸೂರಿನ ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲಾಗಿದೆ.

<><><>

ರಾಜಕಾರಣಿ ಎಸ್.ಆರ್ ಪಾಟೀಲ್, ಸಿತಾರ್ ವಾದಕ ಛೋಟೆ ರಹಮತ್ ಖಾನ್ ಸೇರಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿ, ಸಾಧನೆ ಮಾಡಿದ 12 ಜನರನ್ನು 2024 ರ ಅವ್ವ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು, ಅವ್ವ ಸೇವಾ ಟ್ರಸ್ಟ್ ಅಧ್ಯಕ್ಷ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹುಬ್ಬಳ್ಳಿಯಲ್ಲಿ, ತಿಳಿಸಿದ್ದಾರೆ.

ಹುಬ್ಬಳ್ಳಿಯ ಗುಜರಾತ್ ಭವನದಲ್ಲಿ 15ನೇ ತಾರೀಖು, ಬೆಳಗ್ಗೆ 10.30ಕ್ಕೆ ಅವ್ವ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

<><><>

ಸೂಫಿ ಪಂಥ ಧರ್ಮವಲ್ಲ; ಅದು ದಾರ್ಶನಿಕ ಪಂಥ. ಜಗತ್ತಿನ ಬಹಳಷ್ಟು ಜನರು ಸೂಫೀಗಳಿಂದ ಪ್ರಭಾವಿತರಾಗಿದ್ದಾರೆ ಎಂದು, ಸಾಹಿತಿ ರಹಮತ್ ತರಿಕೆರೆ ಅಭಿಪ್ರಾಯಪಟ್ಟಿದ್ದಾರೆ. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ, ಆಯೋಜಿಸಲಾಗಿರುವ, ಕರ್ನಾಟಕ ದಾರ್ಶನಿಕ ಪಂಥಗಳು ಶೀರ್ಷಿಕೆಯ, 6 ದಿನಗಳ ಉಪನ್ಯಾಸ ಸರಣಿಯ, ಮೊದಲ ದಿನ 'ಸೂಫಿ ಪಂಥ' ಕುರಿತು, ಅವರು ಮಾತನಾಡಿದರು. ಧ್ಯಾನ, ಸಾಧನೆ, ಗುರು ಮಾರ್ಗದಿಂದ ಪಾರಮಾರ್ಥವನ್ನು ಅರಿತುಕೊಳ್ಳಬೇಕೆಂದು ಪಂಥ ಹೇಳುತ್ತದೆ. ಸೂಫಿಗಳ ಮೂಲತತ್ವ ಪ್ರೇಮ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>